ಕರ್ನಾಟಕ ವಿಧಾನಸಭೆ

ಮಂಗಳವಾರ 13ನೇ ಜನವರಿ 2004 ರಂದು

ಸದನವು ವಿಧಾನಸೌಧದಲ್ಲಿರುವ ವಿಧಾನಸಭೆಯ ಸಭಾಂಗಣದಲ್ಲಿ

ಬೆಳಿಗ್ಗೆ 10–40 ಗಂಟೆಗೆ ಸಮಾವೇಶಗೊಂಡಿತು

ಅಧ್ಯಕ್ಷರು (ಶ್ರೀ ಎಂ.ವಿ. ವೆಂಕಟಪ್ಪ) ರವರು

ಪೀಠವನ್ನು ಅಲಂಕರಿಸಿದ್ದರು

**ಅಧ್ಯಕ್ಷರು :** ಈ ದಿನದ ಕಾರ್ಯಕ್ರಮಗಳ ಪಟ್ಟಿ ಪ್ರಕಾರ ಮೊದಲನೇ ಕಾರ್ಯಕ್ರಮ ಸಂತಾಪ ಸೂಚನೆ.

## 1. ಸಂತಾಪ ಸೂಚನೆ

**ವಿಷಯ :– ಮಾಜಿ ಮುಖ್ಯಮಂತ್ರಿಗಳಾದ ಶ್ರೀ ರಾಮಕೃಷ್ಣ ಹೆಗಡೆ ಅವರ ನಿಧನ ಕುರಿತು.**

**ಅಧ್ಯಕ್ಷರು :** ಶ್ರೀಮಾನ್ ರಾಮಕೃಷ್ಣ ಹೆಗಡೆಯವರು ರಾಷ್ಟ್ರದ ಹಿರಿಯ ಮುತ್ಸದ್ಧಿ, ಸಂಸದೀಯ ಪಟು, ಕರ್ನಾಟಕ ರಾಜ್ಯದ ಮಾಜಿ ಮುಖ್ಯಮಂತ್ರಿಗಳಾದ ಶ್ರೀ ರಾಮಕೃಷ್ಣ ಹೆಗಡೆ, ಅವರು 29ನೇ ಆಗಸ್ಟ್, 1927 ರಂದು ಉತ್ತರ ಕನ್ನಡ ಜಿಲ್ಲೆಯ ಸಿದ್ಧಾಪುರ ತಾಲ್ಲೂಕಿನ ದೊಡ್ಡಮನೆ ಎಂಬಲ್ಲಿ ಜನಿಸಿದ್ದರು. ಸ್ನಾತಕೋತ್ತರ ಹಾಗೂ ಕಾನೂನು ಪದವೀಧರರಾಗಿದ್ದ ಶ್ರೀಯುತರು ವೃತ್ತಿಯಲ್ಲಿ ಕೃಷಿಕರಾಗಿದ್ದರು. 1954 ರಿಂದ 1957 ರವರೆಗೆ ಉತ್ತರ ಕನ್ನಡ ಜಿಲ್ಲೆಯಲ್ಲಿ ಕಾಂಗ್ರೆಸ್ ಸಮಿತಿಯ ಅಧ್ಯಕ್ಷರಾಗಿದ್ದರು. 1957ರಲ್ಲಿ ಯೋಜನೆ ಹಾಗೂ ಅಭಿವೃದ್ಧಿ ಉಪಮಂತ್ರಿಗಳಾಗಿ, 1958ರಿಂದ 1962ರವರೆಗೆ ಮೈಸೂರು ಪ್ರದೇಶ ಕಾಂಗ್ರೆಸ್ ಸಮಿತಿಯ ಪ್ರಧಾನ ಕಾರ್ಯದರ್ಶಿಗಳಾಗಿದ್ದರು. ಶ್ರೀಯುತರು 2ನೇ, 3ನೇ, 4ನೇ, 7ನೇ, 8ನೇ ಮತ್ತು 9ನೇ ವಿಧಾನ ಸಭೆಯ ಸದಸ್ಯರಾಗಿದ್ದು, ಶ್ರೀ ನಿಜಲಿಂಗಪ್ಪ, ಶ್ರೀ ವೀರೇಂದ್ರ ಪಾಟೀಲ್ ಮತ್ತು ಶ್ರೀ ಬಿ.ಡಿ. ಜತ್ತಿಯವರ ಮಂತ್ರಿಮಂಡಲದಲ್ಲಿ ಸಂಪುಟ ದರ್ಜೆ ಸಚಿವರಾಗಿ ಸೇವೆ ಸಲ್ಲಿಸಿದ್ದರು. ಶ್ರೀಯುತರು ತುರ್ತು ಪರಿಸ್ಥಿತಿ ಅವಧಿಯಲ್ಲಿ ಸೆರೆಮನೆಯಲ್ಲಿಡಲ್ಪಟ್ಟಿದ್ದರು. ಶ್ರೀಯುತರು 1983 ರಿಂದ 1988ರ ಅವಧಿಯಲ್ಲಿ ಎರಡು ಬಾರಿ ಮುಖ್ಯಮಂತ್ರಿಯಾಗಿ ಆಡಳಿತ ನಡೆಸಿದ್ದರು. ಶ್ರೀಯುತರ ಆಡಳಿತ ಅವಧಿಯಲ್ಲಿ ವಿಕೇಂದ್ರೀಕರಣಕ್ಕೆ ಮಹತ್ವ ನೀಡಿ, ಗ್ರಾಮ ಪಂಚಾಯಿತಿ, ತಾಲ್ಲೂಕು ಪಂಚಾಯಿತಿ ಹಾಗೂ ಜಿಲ್ಲಾ ಪಂಚಾಯಿತಿಗಳ ಅಸ್ಥಿತ್ವಕ್ಕೆ ಬರುವಲ್ಲಿ ಕಾರಣಕರ್ತರಾಗಿದ್ದರು. ಶ್ರೀಯುತರು ಪರಿಶಿಷ್ಟ ಜಾತಿ / ಪರಿಶಿಷ್ಟ ವರ್ಗಗಳ ಮತ್ತು ಅಲ್ಪ ಸಂಖ್ಯಾತರ ಏಳಿಗೆಗಾಗಿ ಅನೇಕ ಅಭಿವೃದ್ಧಿ ಯೋಜನೆಗಳನ್ನು ಪ್ರಾರಂಭಿಸಿದ್ದರು. ಭಾರತದಲ್ಲಿಯೇ ಪ್ರಪ್ರಥಮವಾಗಿ ಮುಖ್ಯಮಂತ್ರಿಗನ್ನೊಳಗೊಂಡಂತೆ ಎಲ್ಲಾ ಸಚಿವರುಗಳ ವಿರುದ್ಧ ಲಂಚ ಪ್ರಕರಣಗಳನ್ನು ವಿಚಾರಣೆ ಮಾಡುವ ಕುರಿತು ಲೋಕಾಯುಕ್ತವನ್ನು ಸ್ಥಾಪಿಸಿದ್ದರು. ಜನತಾದಳದ ಉಪಾಧ್ಯಕ್ಷರಾಗಿ ಹಾಗೂ ಲೋಕಶಕ್ತಿ ಪಕ್ಷವನ್ನು ಕಟ್ಟುವಲ್ಲಿ ಮುಂದಾಳತ್ವ ವಹಿಸಿ ಆ ಪಕ್ಷದ ಅಧ್ಯಕ್ಷರಾಗಿ ಸೇವೆ ಸಲ್ಲಿಸಿದ್ದರು. ಶ್ರೀಯುತರು ಜ್ಯುಡಿಷಿಯರಿ ಟುಡೇ ಪಾರ್ಲಿಮೆಂಟ್ ಮತ್ತು ಪೊಲಿಟಿಕಲ್ ಕಲ್ಚರ್, ಕ್ಲೀನ್ ಗೌರ್ನಮೆಂಟ್ ಹಾಗೂ ಅನೇಕ ವಿಚಾರಗಳ ಬಗ್ಗೆ ಪುಸ್ತಕಗಳನ್ನು ಪ್ರಕಟಿಸಿದ್ದರು. ಶ್ರೀಯುತರು ಚಲನಚಿತ್ರದಲ್ಲೂ ಸಹ ನಟಿಸಿದ್ದರು. 1972 ರಿಂದ 1978ರವರೆಗೆ ವಿಧಾನ ಪರಿಷತ್ತಿನ ಸದಸ್ಯರಾಗಿ, 1976 ರಲ್ಲಿ ವಿರೋಧ ಪಕ್ಷದ ನಾಯಕರಾಗಿ ಕಾರ್ಯ ನಿರ್ವಹಿಸಿದ್ದರು. 1977 ರಿಂದ 1983 ರ ವರೆಗೆ ಹಾಗೂ 1996 ರಿಂದ 2002 ರ ವರೆಗೆ ರಾಜ್ಯ ಸಭಾ ಸದಸ್ಯರಾಗಿ ಸೇವೆ